## ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 22.12.2018 ರಂದು ಪೂರ್ವಾಹ್ನ ಗಂಟೆ 11:00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2018ನೇ ಸಾಲಿನ ಎಂಟನೆಯ ಸಾಮಾನ್ಯ ಸಭೆಯ ನಡಾವಳಿಗಳು.**

**ಉಪಸ್ಥಿತ ಸದಸ್ಯರು :**

**ಅನುಪಸ್ಥಿತ ಸದಸ್ಯರು:**

ಪ್ರಾರಂಭದಲ್ಲಿ ಮಾನ್ಯ ಕುಲಪತಿಯವರು ಎಲ್ಲಾ ಸದಸ್ಯರನ್ನು ಸಭೆಗೆ ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

### ಪ್ರಾರಂಭಿಕ

1. ಘನತೆವೆತ್ತ ರಾಜ್ಯಪಾಲರು **ಪ್ರೊ. ಈಶ್ವರ ಪಿ.**, ಡೀನ್, ವಾಣಿಜ್ಯ ನಿಕಾಯ ಇವರನ್ನು ಕರ್ನಾಟಕ ವಿಶ್ವವಿದ್ಯಾನಿಲಯಗಳ ಅಧಿನಿಯಮ ಸೆಕ್ಷನ್ 16(2)ರನ್ವಯ ಪತ್ರ ಸಂ. ಜಿಎಸ್. 01 ಎಂಎಲ್ಎಂ 2018 ದಿನಾಂಕ 03.11.2018 ರಲ್ಲಿ ದಿನಾಂಕ 07.11.2018 ರಿಂದ ಮಂಗಳೂರು ವಿಶ್ವವಿದ್ಯಾನಿಲಯದ ಪ್ರಭಾರ ಕುಲಪತಿಯವರನ್ನಾಗಿ ನೇಮಕಗೊಂಡು ಕುಲಪತಿ ಹುದ್ದೆಯ ಪ್ರಭಾರವನ್ನು ವಹಿಸಿಕೊಂಡಿರುವುದರಿಂದ ಇವರನ್ನು ಕುಲಸಚಿವರು ಸಿಂಡಿಕೇಟ್ ಸಭೆಗೆ ಪರಿಚಯಿಸಿ ಸ್ವಾಗತಿಸಿದರು.

   ಮಾನ್ಯ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಇವರ ಪರವಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸಭೆಗಳಲ್ಲಿ ಭಾಗವಹಿಸಲು ಪ್ರತ್ಯಾಯೋಜಿಸಲಾಗಿರುವ ಮಂಗಳೂರು ಪ್ರಾದೇಶಿಕ ಕಛೇರಿಯ ನೂತನ ಜಂಟಿ ನಿರ್ದೇಶಕರು (ಪ್ರಭಾರ) **ಶ್ರೀ ಅಪ್ಪಾಜಿ ಗೌಡ** ಇವರನ್ನು ಹಾಗೂ ಕರ್ನಾಟಕ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000 ರ ಸೆಕ್ಷನ್ 28(1)(ಎಫ್) ರಂತೆ ಸಿಂಡಿಕೇಟ್ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ;

   - **ಶ್ರೀಮತಿ ಅರುಣಾ ಪಿ ಕಾಮತ್**, ಪ್ರಾಂಶುಪಾಲರು, ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವ್ಯವಹಾರ ಆಡಳಿತ ಮಹಾವಿದ್ಯಾಲಯ, ಮಂಗಳೂರು.
   - **ಡಾ. ಕುರಿಯನ್, ಪ್ರಾಂಶುಪಾಲರು**, ಆಳ್ವಾಸ್ ಕಾಲೇಜು, ಮೂಡಬಿದಿರೆ.
   - **ಪ್ರೊ. ಲಿಯೋ ನರೋನ್ಹ**, ಪ್ರಾಂಶುಪಾಲರು, ಸೆಂಟ್ ಫಿಲೋಮಿನಾ ಕಾಲೇಜು, ಪುತ್ತೂರು

   ಇವರೆಲ್ಲರನ್ನು ಸಿಂಡಿಕೇಟ್ ಸಭೆಗೆ ಪರಿಚಯಿಸಿ ಸ್ವಾಗತಿಸಲಾಯಿತು.

2. ಘತನೆವೆತ್ತ ರಾಜ್ಯಪಾಲರಿಂದ ಕರ್ನಾಟಕ ವಿಶ್ವವಿದ್ಯಾನಿಲಯಗಳ ಅಧಿನಿಯಮ ಸೆಕ್ಷನ್ 16(2)ರನ್ವಯ ಪತ್ರ ಸಂ. ಜಿಎಸ್ 01 ಎಂಎಲ್ಎಂ 2018, ದಿನಾಂಕ 04.06.2018 ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಪ್ರಭಾರ ಕುಲಪತಿಗಳಾಗಿ ನೇಮಕಗೊಂಡಿದ್ದ ಶಿಕ್ಷಣ ನಿಕಾಯದ ಡೀನ್ **ಡಾ. ಕಿಶೋರ್ ಕುಮಾರ್ ಸಿ.ಕೆ.** ಇವರ ಸೇವಾವಧಿ ದಿನಾಂಕ 06.11.2018ಕ್ಕೆ ಅಂತ್ಯಗೊಂಡಿದೆ. ಇವರು ಪ್ರಭಾರ ಕುಲಪತಿಗಳಾಗಿ ಹಾಗೂ ಸಿಂಡಿಕೇಟ್‌ನ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಿದ್ದಕ್ಕಾಗಿ ಸಿಂಡಿಕೇಟ್ ಸಭೆಯಲ್ಲಿ ಕೃತಜ್ಞತಾಪೂರ್ವಕವಾಗಿ ಅಭಿನಂದಿಸಲಾಯಿತು.

   ಮಾನ್ಯ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಇವರ ಪರವಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸಭೆಗಳಲ್ಲಿ ಭಾಗವಹಿಸಲು ಪ್ರತ್ಯಾಯೋಜಿಸಲಾಗಿದ್ದ **ಶ್ರೀ ಮಹೇಶ್ ರಾವ್,** ಜಂಟಿ ನಿರ್ದೇಶಕರು (ಪ್ರಭಾರ), ಕಾಲೇಜು ಶಿಕ್ಷಣ ಇಲಾಖೆ ಇವರು ದಿನಾಂಕ 31.10.2018 ವಯೋನಿವೃತ್ತರಾಗಿದ್ದಾರೆ ಹಾಗೂ ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಪರವಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸಭೆಗಳಲ್ಲಿ ಭಾಗವಹಿಸಲು ಪ್ರತ್ಯಾಯೋಜಿಸಲಾಗಿದ್ದ

ಮಂಗಳೂರಿನ ಶಿಕ್ಷಕ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಶ್ರೀ **ಟಿ. ನಾರಾಯಣ ಗೌಡ** ಇವರು ವರ್ಗಾವಣೆ ಹೊಂದಿರುತ್ತಾರೆ ಹಾಗೂ ಕರ್ನಾಟಕ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000 ರ ಸೆಕ್ಷನ್ 28(1)(ಎಫ್) ರಂತೆ ಸಿಂಡಿಕೇಟ್ ಸದಸ್ಯರಾಗಿ ನಾಮನಿರ್ದೇಶನ ಗೊಂಡಿದ್ದ ಈ ಕೆಳಕಂಡವರ ಸಿಂಡಿಕೇಟು ಸದಸ್ಯತ್ವದ ಅವಧಿ ಅಂತ್ಯಗೊಂಡಿದೆ.

- **ಡಾ. ಯು. ತಾರಾ ರಾವ್,** ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕಾವೂರು, ಮಂಗಳೂರು.
- **ಪ್ರೊ. ಬಿ. ರಹಮತ್ ಆಲಿ,** ಪ್ರಾಂಶುಪಾಲರು, ಬದ್ರಿಯಾ ಪ್ರಥಮ ದರ್ಜೆ ಕಾಲೇಜು, ಕಂದಕ, ಮಂಗಳೂರು.
- **ಡಾ. ಗಣಪತಿ ಭಟ್,** ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪುಂಜಾಲಕಟ್ಟೆ

ಮೇಲ್ಕಂಡವರು ಸಿಂಡಿಕೇಟ್ ಸದಸ್ಯರಾಗಿದ್ದ ಅವಧಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕಾಗಿ ಇವರೆಲ್ಲರನ್ನು ಸಿಂಡಿಕೇಟ್ ಸಭೆಯಲ್ಲಿ ಕೃತಜ್ಞತಾಪೂರ್ವಕವಾಗಿ ಅಭಿನಂದಿಸಲಾಯಿತು.

**I ನಡಾವಳಿಗಳ ದೃಢೀಕರಣ**

1. ದಿನಾಂಕ 27.10.2018ರಂದು ನಡೆದ 2018ನೇ ಸಾಲಿನ ಸಿಂಡಿಕೇಟಿನ ಏಳನೇ ಸಾಮಾನ್ಯ ಸಭೆಯ ಕಾರ್ಯಸೂಚಿ ಸಂ. ಸಿಬ್ಬಂದಿ:ಸಾ.ಸ.7:35 (2018) ರ ನಿರ್ಣಯದಲ್ಲಿ ಸದರಿಯವರ ಮನವಿಯನ್ನು ಪರಿಗಣಿಸಿ ಡಾ. ಮಾಧವ, ಸಹಾಯಕ ಪ್ರಾಧ್ಯಾಪಕರು, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇವರನ್ನು "ವಿಶ್ವವಿದ್ಯಾನಿಲಯ ಘಟಕ ಕಾಲೇಜು, ನೆಲ್ಯಾಡಿ, ಪುತ್ತೂರು ತಾಲೂಕು" ಇಲ್ಲಿಗೆ ನಿಯೋಜಿಸಲು ನಿರ್ಣಯಿಸಲಾಯಿತು ಎಂಬುದನ್ನು "ವಿಶ್ವವಿದ್ಯಾನಿಲಯ ಸಂಧ್ಯಾ ಕಾಲೇಜು, ಮಂಗಳೂರು" ಇಲ್ಲಿಗೆ ನಿಯೋಜಿಸಲು ನಿರ್ಣಯಿಸಲಾಯಿತು ಎಂಬ ತಿದ್ದುಪಡಿಯೊಂದಿಗೆ ದೃಢೀಕರಿಸಲಾಯಿತು.

**II ಅನುಸರಣಾ ವರದಿಯ ಅನುಮೋದನೆ**

1. ದಿನಾಂಕ 18.09.2018ರಂದು ನಡೆದ ಸಿಂಡಿಕೇಟಿನ 2018ನೇ ಸಾಲಿನ ಆರನೆಯ ಸಾಮಾನ್ಯ ಸಭೆಯ ಅನುಸರಣಾ ವರದಿಯನ್ನು ಅನುಮೋದಿಸಲಾಯಿತು.

**III ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು:**

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್:ಸಾ.ಸ.8:1(2018)
**ವಿಷಯ :** ಸ್ನಾತಕೋತ್ತರ ವ್ಯವಹಾರ ಆಡಳಿತ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ
**ನಿರ್ಣಯ:** ಸ್ನಾತಕೋತ್ತರ ವ್ಯವಹಾರ ಆಡಳಿತ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್:ಸಾ.ಸ.8:2(2018)
**ವಿಷಯ :** ಸ್ನಾತಕೋತ್ತರ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.
**ನಿರ್ಣಯ:** ಸ್ನಾತಕೋತ್ತರ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್:ಸಾ.ಸ.8:3(2018)
**ವಿಷಯ :** ಸ್ನಾತಕೋತ್ತರ ಮಾನವಪ್ರಜ್ಞೆ ಮತ್ತು ಯೋಗವಿಜ್ಞಾನ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.
**ನಿರ್ಣಯ:** ಸ್ನಾತಕೋತ್ತರ ಮಾನವಪ್ರಜ್ಞೆ ಮತ್ತು ಯೋಗವಿಜ್ಞಾನ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್:ಸಾ.ಸ.8:4(2018)

**ವಿಷಯ :** ಪದವಿ ಮಟ್ಟದ ಕಂಪ್ಯೂಟರ್ ಸಾಯನ್ಸ್ ಮತ್ತು ಕಂಪ್ಯೂಟರ್ ಅಪ್ಲಿಕೇಶನ್ ನ ಸಂಯುಕ್ತ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಬಗ್ಗೆ.

**ನಿರ್ಣಯ:** ಪದವಿ ಮಟ್ಟದ ಕಂಪ್ಯೂಟರ್ ಸಾಯನ್ಸ್ ಮತ್ತು ಕಂಪ್ಯೂಟರ್ ಅಪ್ಲಿಕೇಶನ್‌ನ ಸಂಯುಕ್ತ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್:ಸಾ.ಸ.8:5(2018)

**ವಿಷಯ :** ಪದವಿ ಮಟ್ಟದ "ಭಾರತ ಸಂವಿಧಾನ, ಮಾನವ ಹಕ್ಕುಗಳು ಮತ್ತು ಪರಿಸರ" ಸಂಯುಕ್ತ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಬಗ್ಗೆ.

**ನಿರ್ಣಯ:** ಪದವಿ ಮಟ್ಟದ "ಭಾರತ ಸಂವಿಧಾನ, ಮಾನವ ಹಕ್ಕುಗಳು ಮತ್ತು ಪರಿಸರ" ಸಂಯುಕ್ತ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್:ಸಾ.ಸ.8:6(2018)

**ವಿಷಯ :** ಪದವಿ ಮಟ್ಟದ ರಸಾಯನಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಬಗ್ಗೆ.

**ನಿರ್ಣಯ:** ಪದವಿ ಮಟ್ಟದ ರಸಾಯನಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್:ಸಾ.ಸ.8:7(2018)

**ವಿಷಯ :** ಪದವಿ ಮಟ್ಟದ ಫ್ಯಾಶನ್ ಡಿಸೈನ್, ಗಾರ್ಮೆಂಟ್ ಡಿಸೈನ್ ಮತ್ತು ಲೆದರ್ ಡಿಸೈನ್ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಬಗ್ಗೆ.

**ನಿರ್ಣಯ:** ಪದವಿ ಮಟ್ಟದ ಫ್ಯಾಶನ್ ಡಿಸೈನ್, ಗಾರ್ಮೆಂಟ್ ಡಿಸೈನ್ ಮತ್ತು ಲೆದರ್ ಡಿಸೈನ್ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್:ಸಾ.ಸ.8:8(2018)

**ವಿಷಯ :** ಪದವಿ ಮಟ್ಟದ ಸಂಖ್ಯಾಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಬಗ್ಗೆ.

**ನಿರ್ಣಯ:** ಪದವಿ ಮಟ್ಟದ ಸಂಖ್ಯಾಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್:ಸಾ.ಸ.8:9(2018)

**ವಿಷಯ :** ಪದವಿ ಮಟ್ಟದ ಭೌತಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಬಗ್ಗೆ.

**ನಿರ್ಣಯ:** ಪದವಿ ಮಟ್ಟದ ಭೌತಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್:ಸಾ.ಸ.8:10(2018)

**ವಿಷಯ :** ಪದವಿ ಮಟ್ಟದ ಗಣಿತಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಬಗ್ಗೆ.

**ನಿರ್ಣಯ:** ಪದವಿ ಮಟ್ಟದ ಗಣಿತಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್:ಸಾ.ಸ.8:11(2018)

**ವಿಷಯ :** ಪದವಿ ಮಟ್ಟದ ಸಸ್ಯಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಬಗ್ಗೆ.

**ನಿರ್ಣಯ:** ಪದವಿ ಮಟ್ಟದ ಸಸ್ಯಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್:ಸಾ.ಸ.8:12(2018)

**ವಿಷಯ :** ಪದವಿ ಮಟ್ಟದ ಅರ್ಥಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಬಗ್ಗೆ.

**ನಿರ್ಣಯ:** ಪದವಿ ಮಟ್ಟದ ಅರ್ಥಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್‌ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್:ಸಾ.ಸ.8:13(2018)

**ವಿಷಯ :** ಸ್ನಾತಕೋತ್ತರ ಜೀವವಿಜ್ಞಾನ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಸ್ನಾತಕೋತ್ತರ ಜೀವವಿಜ್ಞಾನ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್:ಸಾ.ಸ.8:14(2018)

**ವಿಷಯ :** ಸ್ನಾತಕೋತ್ತರ ಕಂಪ್ಯೂಟರ್ ಸಾಯನ್ಸ್, ಎಂ.ಸಿ.ಎ. ಮತ್ತು ಪಿ.ಜಿ.ಡಿ.ಸಿ.ಎ. ಸಂಯುಕ್ತ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಸ್ನಾತಕೋತ್ತರ ಕಂಪ್ಯೂಟರ್ ಸಾಯನ್ಸ್, ಎಂ.ಸಿ.ಎ. ಮತ್ತು ಪಿ.ಜಿ.ಡಿ.ಸಿ.ಎ. ಸಂಯುಕ್ತ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.8:15(2018)

**ವಿಷಯ :** ಶ್ರೀ ಎಂ. ಜಿತೇಂದ್ರ ಕುಮಾರ್, ಸಿಸ್ಟಂ ಪ್ರೋಗ್ರಾಮರ್/ಅನ್ಯಾಲಿಸ್ಟ್, ಗಣಕ ವಿಜ್ಞಾನ ವಿಭಾಗ, ಫೀಲ್ಡ್ ಮಾರ್ಷಲ್ ಕೆ.ಎಮ್. ಕಾರ್ಯಪ್ಪ ಕಾಲೇಜು, ಮಡಿಕೇರಿ ಇವರ ಅಂತರ್ ವಿಶ್ವವಿದ್ಯಾನಿಲಯಗಳ ವರ್ಗಾವಣೆಯಡಿಯಲ್ಲಿ ಮೈಸೂರು ವಿಶ್ವವಿದ್ಯಾನಿಲಯಕ್ಕೆ ವರ್ಗಾವಣೆ ಹೊಂದಲು ನಿರಾಕ್ಷೇಪಣಾ ಪತ್ರ ಕೋರಿ ಸಲ್ಲಿಸಿರುವ ಮನವಿ ಬಗ್ಗೆ.

**ನಿರ್ಣಯ:** ಸದರಿಯವರ ಮನವಿಯನ್ನು ಪರಿಶೀಲನೆಗಾಗಿ ಅಂತರ ವಿಶ್ವವಿದ್ಯಾನಿಲಯ ವರ್ಗಾವಣೆಯ ಸಿಂಡಿಕೇಟ್ ಉಪ ಸಮಿತಿಗೆ ಕಳುಹಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.8:16(2018)

**ವಿಷಯ :** ಶ್ರೀಮತಿ ಕಮಲ ಕೆ.ಪಿ. ಸಹ ಪ್ರಾಧ್ಯಾಪಕರು, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇವರಿಗೆ ವಿಶ್ವವಿದ್ಯಾನಿಲಯದ ಸೇವೆಯಿಂದ ಸ್ವಯಂ ನಿವೃತ್ತಿ ಹೊಂದಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಶ್ರೀಮತಿ ಕಮಲ ಕೆ.ಪಿ. ಸಹ ಪ್ರಾಧ್ಯಾಪಕರು, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇವರಿಗೆ ವಿಶ್ವವಿದ್ಯಾನಿಲಯದ ಸೇವೆಯಿಂದ ಸ್ವಯಂ ನಿವೃತ್ತಿ ಹೊಂದಲು ಅನುಮತಿ ನೀಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ: ಸಾ.ಸ.8:17(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಪ್ರಾಧಿಕಾರ/ಸಮಿತಿ ಸಭೆಗಳಿಗೆ ಹಾಜರಾಗುವ ಸದಸ್ಯರಿಗೆ ನೀಡಲಾಗುವ ಪ್ರಯಾಣ ಭತ್ಯೆ ಹಾಗೂ ಉಪಸ್ಥಿತಿ ಭತ್ಯೆಯ ಪರಿಷ್ಕರಣೆಯ ಬಗ್ಗೆ.

**ನಿರ್ಣಯ:** ಪ್ರಯಾಣ ಭತ್ಯೆ ಹಾಗೂ ಉಪಸ್ಥಿತಿ ಭತ್ಯೆಯ ಪರಿಷ್ಕರಣೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ: ಸಾ.ಸ.8:18(2018)

**ವಿಷಯ :** ವಿಶ್ವವಿದ್ಯಾನಿಲಯ ಗ್ರಂಥಾಲಯಕ್ಕೆ ಅಗತ್ಯವಿದ್ದ 10 KVA UPS with Battery ಖರೀದಿಗೆ ಘಟನೋತ್ತರ ಮಂಜೂರಾತಿ ಕುರಿತು.

**ನಿರ್ಣಯ:** ಖರೀದಿಗೆ ಘಟನೋತ್ತರ ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ: ಸಾ.ಸ.8:19(2018)

**ವಿಷಯ :** ಶ್ರೀ ವಸಂತ, ಹಿರಿಯ ಬೆರಳಚ್ಚುಗಾರ, ದೂರ ಶಿಕ್ಷಣ ಕೇಂದ್ರ ಇವರ ವೈದ್ಯಕೀಯ ವೆಚ್ಚ ಮರುಭರಣೆಯ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು ಹಾಗೂ ಇಂತಹ ಪ್ರಕರಣಗಳಲ್ಲಿ ತುರ್ತು ಚಿಕಿತ್ಸೆಗಾಗಿ ಸಹಾಯ ನೀಡಲು "ಎಂಪ್ಲಾಯಿಸ್ ವೆಲ್ಫೇರ್ ಫಂಡ್" ನ್ನು ಸಾಧ್ಯವಾದಲ್ಲಿ ಸ್ಥಾಪಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ: ಸಾ.ಸ.8:20(2018)

**ವಿಷಯ :** ಪಿ.ಹೆಚ್.ಡಿ. ಕೋರ್ಸ್ ವರ್ಕ್ 2017 – ಪರೀಕ್ಷಾ ಮಂಡಳಿ ರಚನೆ – ಮಂಜೂರಾತಿ ಬಗ್ಗೆ.

**ನಿರ್ಣಯ:** ಘಟನೋತ್ತರ ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಅಭಿವೃದ್ಧಿ: ಸಾ.ಸ.8:21(2018)

**ವಿಷಯ :** CARRT - ಕೇಂದ್ರಕ್ಕೆ 10KVA UPSನ್ನು ವಿಶ್ವವಿದ್ಯಾನಿಲಯದ ಧಾರಣಾಗುತ್ತಿಗೆ ದರದಲ್ಲಿ ಖರೀದಿ ಪ್ರಸ್ತಾವನೆಗೆ ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಖರೀದಿ ಪ್ರಸ್ತಾವನೆಗೆ ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಅಭಿವೃದ್ಧಿ: ಸಾ.ಸ.8:22(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಪ್ರೊ. ಜೋಗನ್ ಶಂಕರ್ ಇವರ ಗೌರವಾರ್ಥ ಚಿನ್ನದ ಪದಕ ದತ್ತಿನಿಧಿ ಸ್ಥಾಪನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ: ಸಾ.ಸ.8:23(2018)

**ವಿಷಯ :** ಶೈಕ್ಷಣಿಕ ವರ್ಷ 2018–19ನೇ ಸಾಲಿನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳಲ್ಲಿ, ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಲ್ಲಿ ಮತ್ತು ಸ್ನಾತಕೋತ್ತರ ಕೇಂದ್ರ, ಚಿಕ್ಕ ಅಳುವಾರ, ಕುಶಾಲನಗರ ಇಲ್ಲಿ ನಡೆಸಲ್ಪಡುವ ಕೋರ್ಸ್ ಗಳಿಗೆ ವಿದ್ಯಾರ್ಥಿ ಪರಿಮಿತಿ ನಿಗದಿ ಬಗ್ಗೆ.

**ನಿರ್ಣಯ:** ಘಟನೋತ್ತರ ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ: ಸಾ..ಸ.8:24(2018)

**ವಿಷಯ :** ಶೈಕ್ಷಣಿಕ ವರ್ಷ 2019–20ನೇ ಸಾಲಿಗೆ ಹೊಸ/ವಿಸ್ತರಣಾ/ಮುಂದುವರಿಕೆ/ಶಾಶ್ವತ ಸಂಯೋಜನೆ ಮಂಜೂರು ಮಾಡುವ ಬಗ್ಗೆ ಕಾಲೇಜುಗಳ/ ವಿದ್ಯಾಸಂಸ್ಥೆಗಳ ಪರಿಶೀಲನೆಗೆ ಸ್ಥಳೀಯ ವಿಚಾರಣಾ ಸಮಿತಿಯನ್ನು ರಚಿಸುವ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯನ್ನು ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್: ಸಾ.ಸ.8:25(2018)

**ವಿಷಯ :** ತುಳು ಭಾಷಾ (ಸರ್ಟಿಫಿಕೇಟ್ ಮತ್ತು ಡಿಪ್ಲೊಮಾ ಕೋರ್ಸ್) ಅಧ್ಯಯನ ಮಂಡಳಿಯನ್ನು "ಪದವಿ ಮತ್ತು ಸ್ನಾತಕೋತ್ತರ ತುಳು ಸಂಯುಕ್ತ ಅಧ್ಯಯನ ಮಂಡಳಿ" ಎಂದು ಮರು ನಾಮಕರಣ ಮಾಡುವ ಬಗ್ಗೆ.

**ನಿರ್ಣಯ:** ಮರುನಾಮಕರಣ ಮಾಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು ಹಾಗೂ "ಪದವಿ ಮತ್ತು ಸ್ನಾತಕೋತ್ತರ ತುಳು ಸಂಯುಕ್ತ ಅಧ್ಯಯನ ಮಂಡಳಿ" ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್: ಸಾ.ಸ.8:26(2018)

**ವಿಷಯ :** ಪದವಿ ಮತ್ತು ಸ್ನಾತಕೋತ್ತರ ಜೀವರಸಾಯನಶಾಸ್ತ್ರದ ಸಂಯುಕ್ತ ಅಧ್ಯಯನ ಮಂಡಳಿ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಪದವಿ ಮತ್ತು ಸ್ನಾತಕೋತ್ತರ ಜೀವರಸಾಯನಶಾಸ್ತ್ರದ ಸಂಯುಕ್ತ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್: ಸಾ.ಸ.8:27(2018)

**ವಿಷಯ :** ಸ್ನಾತಕೋತ್ತರ ಇತಿಹಾಸ ಅಧ್ಯಯನ ಮಂಡಳಿಯನ್ನು "ಸ್ನಾತಕೋತ್ತರ ಇತಿಹಾಸ ಮತ್ತು ಪುರಾತತ್ವಶಾಸ್ತ್ರ ಸಂಯುಕ್ತ ಅಧ್ಯಯನ ಮಂಡಳಿ" ಎಂದು ಮರುನಾಮಕರಣ ಮತ್ತು ರಚನೆ ಬಗ್ಗೆ.

**ನಿರ್ಣಯ:** ಮರುನಾಮಕರಣ ಮಾಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು ಹಾಗೂ "ಸ್ನಾತಕೋತ್ತರ ಇತಿಹಾಸ ಮತ್ತು ಪುರಾತತ್ವಶಾಸ್ತ್ರ ಸಂಯುಕ್ತ ಅಧ್ಯಯನ ಮಂಡಳಿ" ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್: ಸಾ.ಸ.8:28(2018)

**ವಿಷಯ :** ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿನಿಂದ ಓರ್ವ ಸದಸ್ಯರನ್ನು ನಾಮನಿರ್ದೇಶನ ಮಾಡುವ ಬಗ್ಗೆ.

**ನಿರ್ಣಯ:** ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿನಿಂದ ಓರ್ವ ಸದಸ್ಯರನ್ನು ನಾಮನಿರ್ದೇಶನ ಮಾಡುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್: ಸಾ.ಸ.8:29(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಸಮೂಹ ಸಂಪರ್ಕ ಹಾಗೂ ಪತ್ರಿಕೋದ್ಯಮ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರ ನೇಮಕಾತಿ ಬಗ್ಗೆ.

**ನಿರ್ಣಯ:** ಮುಂದಿನ ಆರು ತಿಂಗಳ ಅವಧಿಗೆ ಡಾ. ಪಿ. ಎಲ್. ಧರ್ಮ, ಪ್ರಾಧ್ಯಾಪಕರು, ಸ್ನಾತಕೋತ್ತರ ರಾಜ್ಯಶಾಸ್ತ್ರ ಅಧ್ಯಯನ ವಿಭಾಗ ಇವರನ್ನೇ ಮುಂದುವರಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಸಾ.ಸ.8:30(2018)

**ವಿಷಯ :** ಶ್ರೀ ಎಂ.ಪಿ. ಉಮೇಶ್ಚಂದ್ರ, ಸಹಾಯಕ ಪ್ರಾಧ್ಯಾಪಕರು ಇವರನ್ನು ಸ್ನಾತಕೋತ್ತರ ಸಮೂಹ ಸಂಪರ್ಕ ಮತ್ತು ಪತ್ರಿಕೋದ್ಯಮ (MCJ) ವಿಭಾಗದಲ್ಲಿ ಕರ್ತವ್ಯ ನಿರ್ವಹಿಸಲು ಆದೇಶಿಸುವ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ಶ್ರೀ ಎಂ.ಪಿ. ಉಮೇಶ್ಚಂದ್ರ ಇವರಿಂದ ಮುಚ್ಚಳಿಕೆಯನ್ನು ಪಡೆದು ಸ್ನಾತಕೋತ್ತರ ಸಮೂಹ ಸಂಪರ್ಕ ಮತ್ತು ಪತ್ರಿಕೋದ್ಯಮ (MCJ) ವಿಭಾಗದಲ್ಲಿ ಪಾಠ, ಪ್ರವಚನ ಹಾಗೂ ಸಂಶೋಧನೆ ಕೈಗೊಳ್ಳಲು ಆದೇಶಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಸಾ.ಸ.8:31(2018)

**ವಿಷಯ :** ಶ್ರೀ ದಯಾಕರ ಬಿ., ಸಹಾಯಕ ದೈಹಿಕ ಶಿಕ್ಷಣ ನಿರ್ದೇಶಕರು, ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇವರಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಂನಡಿಯಲ್ಲಿ ಹಿರಿಯ ವೇತನ ಶ್ರೇಣಿ ಸ್ಥಾನೀಕರಣ ನೀಡುವ ಕುರಿತು.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ: ಸಾ.ಸ.8:32(2018)

**ವಿಷಯ :** ದಿನಾಂಕ 01.07.2018ರವರೆಗಿನ ಬಿ.ಎ/ಬಿ.ಎಸ್ಸಿ/ಬಿ.ಕಾಂ/ಬಿ.ಎಸ್.ಡಬ್ಲ್ಯು/ಎಲ್ಎಲ್‌ಬಿ/ಬಿ.ಎಡ್./ಬಿ.ಪಿ.(ಹೆಚ್.ಆರ್.ಡಿ)/ಬಿ.ಬಿ.ಎಂ./ಬಿ.ಹೆಚ್.ಎಂ./ಬಿ.ಹೆಚ್.ಎಸ್./ಬಿ.ಸಿ.ಎ/ಬಿ.ಎಸ್ಸಿ ಫ್ಯಾಷನ್/ಗಾರ್ಮೆಂಟ್ ಡಿಸೈನ್ ಮತ್ತು ಬಿ.ಎಸ್ಸಿ. ಇಂಟೀರಿಯರ್ ಡಿಸೈನ್ ಆ್ಯಂಡ್ ಡೆಕೊರೇಶನ್/ಬಿ.ಪಿ.ಎಡ್/ಬಿ.ಎಸ್ಸಿ (ಎಫ್.ಎನ್.ಡಿ)/ಬಿ.ಎ. ಸೆಕ್ಯೂರಿಟಿ ಆ್ಯಂಡ್ ಡಿಟೆಕ್ಟಿವ್ ಸೈನ್ಸ್/ಸ್ಪೀಚ್ ಆ್ಯಂಡ್ ಹಿಯರಿಂಗ್ ಪದವಿ ಕೋರ್ಸಿಗೆ ಸಂಬಂಧಿಸಿದಂತೆ ಅಧ್ಯಾಪಕರ ಜ್ಯೇಷ್ಠತಾ ಪಟ್ಟಿ ಅನುಮೋದನೆ ಕುರಿತು.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇಬಿ: ಸಾ.ಸ.8:33(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಕಟ್ಟಡಕ್ಕೆ ಪರವಾನಿಗೆ ಶುಲ್ಕ ನಿಗದಿಪಡಿಸುವ ಬಗ್ಗೆ.

**ನಿರ್ಣಯ:** ದಿನಾಂಕ 01.02.2019 ರಿಂದ 31.01.2020 ರವರೆಗೆ ಮಾಸಿಕ ರೂ. 30,000/- (ರೂಪಾಯಿ ಮುವ್ವತ್ತು ಸಾವಿರ ಮಾತ್ರ) ನಿಗದಿಪಡಿಸಲಾಯಿತು ಹಾಗೂ ಪ್ರತೀ ವರ್ಷ ಶೇ.10ರಷ್ಟು ಬಾಡಿಗೆಯನ್ನು ಹೆಚ್ಚಿಸುವಂತೆ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ: ಸಾ.ಸ.8:34(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ವಿಭಾಗ/ಕೋರ್ಸ್ ಗಳಿಗೆ Adjunct Professors ನ್ನು ನೇಮಕಾತಿ ಮಾಡಿದ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ: ಸಾ.ಸ.8:35(2018)

**ವಿಷಯ :** IQAC ಸಭಾ ನಡಾವಳಿ ಹಾಗೂ 2017-18 AQAR ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.8:36(2018)

**ವಿಷಯ :** UGC SAP ಜೀವವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ – Refrigerated Table Top Centrifuge ಉಪಕರಣವನ್ನು ಖರೀದಿಸಲು ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಖರೀದಿ ಸಮಿತಿಯ ನಿರ್ಣಯವನ್ನು ಅಂಗೀಕರಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಸಾ.ಸ.8:37(2018)

**ವಿಷಯ :** ಡಾ. ಸುರೇಶ್ ಪಿ. ನಾಯಕ್, ನಿವೃತ್ತ ಪ್ರಾಧ್ಯಾಪಕರು, ರಸಾಯನಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರ ಹಿಂದಿನ ಸೇವೆಯನ್ನು ನಿವೃತ್ತಿ ಸೌಲಭ್ಯಕ್ಕೆ ಪರಿಗಣಿಸುವ ಬಗ್ಗೆ.

**ನಿರ್ಣಯ:** ಪರಿಗಣಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಸಾ.ಸ.8:38(2018)

**ವಿಷಯ :** ಡಾ. ಚಂದ್ರು ಹೆಗ್ಡೆ, ಸಹಾಯಕ ಪ್ರಾಧ್ಯಾಪಕರು, ಗಣಿತ ಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರು ದಿನಾಂಕ 16.12.2018 ರಿಂದ 18.12.2018 ರವರೆಗೆ Mahidol University, Bangkok, Tailand ಇಲ್ಲಿ ನಡೆಯಲಿರುವ International Conference ನಲ್ಲಿ ಭಾಗವಹಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** International Conference ನಲ್ಲಿ ಭಾಗವಹಿಸಲು ಅನುಮತಿ ನೀಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಸಾ.ಸ.8:39(2018)

**ವಿಷಯ :** ಡಾ. ಜೆ. ಈಶ್ವರ ಭಟ್, ನಿವೃತ್ತ ಪ್ರಾಧ್ಯಾಪಕರು, ರಸಾಯನಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರ ಹಿಂದಿನ ಸೇವೆಯನ್ನು ನಿವೃತ್ತಿ ಸೌಲಭ್ಯಕ್ಕೆ ಪರಿಗಣಿಸುವ ಬಗ್ಗೆ.

**ನಿರ್ಣಯ:** ಪರಿಗಣಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ: ಸಾ.ಸ.8:40(2018)

**ವಿಷಯ :** DST – FIST, ಜೀವ ವಿಜ್ಞಾನ ವಿಭಾಗ – ಉಪಕರಣದ ಖರೀದಿಗೆ ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಖರೀದಿ ಸಮಿತಿಯ ನಿರ್ಣಯವನ್ನು ಅಂಗೀಕರಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ: ಸಾ.ಸ.8:41(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ 2019ನೇ ಸಾಲಿನ ಡೈರಿ, ಕ್ಯಾಲೆಂಡರ್ ಮುದ್ರಣ ಕುರಿತು.

**ನಿರ್ಣಯ:** ಖರೀದಿ ಸಮಿತಿಯ ನಿರ್ಣಯವನ್ನು ಅಂಗೀಕರಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ: ಸಾ.ಸ.8:42(2018)

**ವಿಷಯ :** ವಿಶ್ವವಿದ್ಯಾನಿಲಯದ ವಿವಿಧ ಕಛೇರಿ/ವಿಭಾಗಗಳಿಗೆ ಪ್ರಿಂಟೆಡ್ ಐಟಂ ಲೇಖನ ಸಾಮಗ್ರಿ ಖರೀದಿ ಕುರಿತು.

**ನಿರ್ಣಯ:** ಖರೀದಿ ಸಮಿತಿಯ ನಿರ್ಣಯವನ್ನು ಅಂಗೀಕರಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ: ಸಾ.ಸ.8:43(2018)

**ವಿಷಯ :** ಕುಲಸಚಿವರ ಕಛೇರಿಯಲ್ಲಿರುವ ಡುಪ್ಲೋ ಯಂತ್ರಕ್ಕೆ ಅಗತ್ಯವಿರುವ Master Roll & Ink ಖರೀದಿ ಕುರಿತು.

**ನಿರ್ಣಯ:** ಖರೀದಿ ಸಮಿತಿಯ ನಿರ್ಣಯವನ್ನು ಅಂಗೀಕರಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ: ಸಾ.ಸ.8:44(2018)

**ವಿಷಯ :** DST – FIST, ಜೀವ ವಿಜ್ಞಾನ ವಿಭಾಗ – ಉಪಕರಣದ ಖರೀದಿಗೆ ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಖರೀದಿ ಸಮಿತಿಯ ನಿರ್ಣಯವನ್ನು ಅಂಗೀಕರಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ: ಸಾ.ಸ.8:45(2018)

**ವಿಷಯ :** ಶ್ರೀಮತಿ ಹೇಮ ಕೆ., ಪ್ರಥಮ ದರ್ಜೆ ಸಹಾಯಕಿ, ಕುಲಸಚಿವರು (ಪರೀಕ್ಷಾಂಗ) ಕಚೇರಿ ಇವರ ವೈದ್ಯಕೀಯ ವೆಚ್ಚ ಮರುಭರಣೆಯ ಬಗ್ಗೆ.

**ನಿರ್ಣಯ:** ಘಟನೋತ್ತರ ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡೀಇವಿ: ಸಾ.ಸ.8:46(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗ ಹಾಗೂ ಘಟಕ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಭಾವನೆ ಪರಿಷ್ಕರಣೆ ಬಗ್ಗೆ.

**ನಿರ್ಣಯ:** ಸಮಿತಿಯ ಶಿಫಾರಸ್ಸನ್ನು ಅಂಗೀಕರಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡೀಇವಿ: ಸಾ.ಸ.8:47(2018)

**ವಿಷಯ :** ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರುಗಳಿಗೆ ಮಂಜೂರಾಗಿರುವ ಜಂಟಿ ಸಂಶೋಧನಾ ಪ್ರೋಗ್ರಾಂಗಳಿಗೆ ಅನುಸರಿಸಬೇಕಾದ ಮಾರ್ಗಸೂಚಿಗಳ ರಚನೆ/ಆಳವಡಿಕೆ ಬಗ್ಗೆ.

**ನಿರ್ಣಯ:** ಸದರಿ ಯೋಜನೆಯ ಅನುಷ್ಠಾನವನ್ನು ಅನುದಾನ ಮಂಜೂರು ಮಾಡಿರುವ "ಯುರೋಪಿಯನ್ ಯುನಿಯನ್" ಮಾರ್ಗಸೂಚಿಯಂತೆ ನಿರ್ವಹಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡೀಇವಿ: ಸಾ.ಸ.8:48(2018)

**ವಿಷಯ :** ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರುಗಳಿಗೆ ಮಂಜೂರಾಗಿರುವ ಜಂಟಿ ಸಂಶೋಧನಾ ಪ್ರೋಗ್ರಾಂಗಳಿಗೆ ಅನುಸರಿಸಬೇಕಾದ ಮಾರ್ಗಸೂಚಿಗಳ ರಚನೆ/ಆಳವಡಿಕೆ ಬಗ್ಗೆ.

**ನಿರ್ಣಯ:** ಸದರಿ ಯೋಜನೆಯ ಅನುಷ್ಠಾನವನ್ನು ಅನುದಾನ ಮಂಜೂರು ಮಾಡಿರುವ "ಯುರೋಪಿಯನ್ ಯುನಿಯನ್" ಮಾರ್ಗಸೂಚಿಯಂತೆ ನಿರ್ವಹಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ: ಸಾ.ಸ.8:49(2018)

**ವಿಷಯ :** ಶೈಕ್ಷಣಿಕ ವರ್ಷ 2018–19ನೇ ಸಾಲಿಗೆ ಮಂಗಳೂರು ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಶುಲ್ಕದ ಬಗ್ಗೆ.

**ನಿರ್ಣಯ:** ಸಲಹಾ ಸಮಿತಿಯನ್ನು ರಚಿಸಿ ಸಮಿತಿಯ ಶಿಫಾರಸ್ಸುಗಳನ್ನು ಸಿಂಡಿಕೇಟ್‌ಗೆ ಮಂಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಸಾ.ಸ.8:50(2018)

**ವಿಷಯ :** SPARSH CELLನ ವಿಚಾರಣಾ ಸಮಿತಿಯು ಸಲ್ಲಿಸಿರುವ ವರದಿ ಮೇಲೆ ಸಿಂಡಿಕೇಟ್ ನಿರ್ಣಯದಂತೆ ಎಚ್ಚರಿಕೆ ಪತ್ರ ನೀಡಿದ ಬಗ್ಗೆ.

**ನಿರ್ಣಯ:** ಡಾ. ಯಶಸ್ವಿನಿಯವರೊಂದಿಗೆ ಸಮಾಲೋಚಿಸಿ ಅವರ ಅಹವಾಲನ್ನು ಪರಿಶೀಲಿಸಿ ಸಿಂಡಿಕೇಟ್‌ಗೆ ವರದಿ ನೀಡಲು ಈ ಕೆಳಕಂಡ ಸಮಿತಿಯನ್ನು ರಚಿಸಲು ನಿರ್ಣಯಿಸಲಾಯಿತು.

1. ಶ್ರೀಮತಿ ಅರುಣಾ ಕಾಮತ್, ಸಿಂಡಿಕೇಟ್ ಸದಸ್ಯರು ಹಾಗೂ ಪ್ರಂಶುಪಾಲರು, ಎಸ್.ಡಿ.ಎಂ. ಕಾಲೇಜ್ ಆಫ್ ಬಿಸಿನೆಸ್ ಮ್ಯಾನೇಜ್‌ಮೆಂಟ್, ಮಂಗಳೂರು.
2. ಡಾ. ಕುರಿಯನ್, ಸಿಂಡಿಕೇಟ್ ಸದಸ್ಯರು ಹಾಗೂ ಪ್ರಾಂಶುಪಾಲರು, ಆಳ್ವಾಸ್ ಕಾಲೇಜು, ಮೂಡುಬಿದಿರೆ.
3. ಪ್ರೊ. ಲಿಯೋ ನರೋನ್ಹಾ, ಸಿಂಡಿಕೇಟ್ ಸದಸ್ಯರು ಹಾಗೂ ಪ್ರಾಂಶುಪಾಲರು, ಸಂತ ಫಿಲೋಮಿನಾ ಕಾಲೇಜು, ಪುತ್ತೂರು.
4. ಪ್ರೊ. ತಾರಾ ಯು.ರಾವ್, ಮಾಜಿ ಸಿಂಡಿಕೇಟ್ ಸದಸ್ಯರು ಹಾಗೂ ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕಾವೂರು, ಮಂಗಳೂರು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ:ಸಾ.ಸ.8:51(2018)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ವಿಭಾಗಗಳಿಗೆ ಬೇಕಾದ ITC Lectern Podium with Built in Amplifier and Speaker Model T-6236B ಗಳನ್ನು ಖರೀದಿಸುವ ಬಗ್ಗೆ.

**ನಿರ್ಣಯ:** ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ: ಸಾ.ಸ.8:52(2018)

**ವಿಷಯ :** ದೂರಶಿಕ್ಷಣ ಕೇಂದ್ರ, ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿ ಪ್ರಾರಂಭಿಸಲಾಗುತ್ತಿರುವ ಬಿ.ಎಡ್. (ಒ.ಡಿ.ಎಲ್) ಕಾರ್ಯಕ್ರಮದ ಸಿದ್ಧಪಾಠ ರಚನೆ ಹಾಗೂ ಪುನರ್ ಪರಿಶೀಲನಾ ಸಂಭಾವನೆ ವೆಚ್ಚ ಪಾವತಿಗೆ ಘಟನೋತ್ತರ ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಘಟನೋತ್ತರ ಅನುಮೋದನೆ ನೀಡಲಾಯಿತು.

**ಇತರೆ ವಿಷಯಗಳು:**

ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳಲ್ಲಿ ಹಾಗೂ ಇತರೆ ಕಾಲೇಜುಗಳಲ್ಲಿರುವ ಸ್ನಾತಕೋತ್ತರ ಪದವಿ ಕೋರ್ಸ್‌ಗಳಿಗೆ ಪ್ರವೇಶಾತಿಯನ್ನು ಬಯಸಿ ಬರುತ್ತಿರುವ ಅರ್ಜಿಗಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗುತ್ತಿರುವುದನ್ನು ಗಮನಿಸಲಾಗಿ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗ ಹಾಗೂ ಘಟಕ ಕಾಲೇಜುಗಳಲ್ಲಿ ಖಾಲಿ ಉಳಿಯುವ ಸ್ನಾತಕೋತ್ತರ ಸೀಟುಗಳನ್ನು ಕರ್ನಾಟಕದ ವಿದ್ಯಾರ್ಥಿಗಳಿಗೆ ನೀಡಿ ಇನ್ನುಳಿದ ಸೀಟುಗಳಿಗೆ ಹೊರ ರಾಜ್ಯದ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲು ನಿರ್ಣಯಿಸಲಾಯಿತು ಹಾಗೂ ಸಂಯೋಜಿತ ಕಾಲೇಜುಗಳ ಸ್ನಾತಕೋತ್ತರ ಪ್ರವೇಶಾತಿಯ ಶೇ.50 ಸರ್ಕಾರಿ ಕೋಟಾದ ಉಳಿಕೆ ಸೀಟುಗಳನ್ನು ಸರ್ಕಾರದ ಅನುಮೋದನೆ ಪಡೆದು ವಿಶ್ವವಿದ್ಯಾನಿಲಯದ ಅನುಮತಿಯೊಂದಿಗೆ ಹೊರ ರಾಜ್ಯಗಳ ವಿದ್ಯಾರ್ಥಿಗಳಿಗೆ ನೀಡಲು ನಿರ್ಣಯಿಸಲಾಯಿತು.

ಮಾನ್ಯ ಕುಲಪತಿಯವರು

ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ಸಹಿ/-
**ಕುಲಸಚಿವರು**

ಸಹಿ/-
**ಕುಲಪತಿಗಳು**